ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **655**

ಸದಸ್ಯರ ಹೆಸರು : ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥ9ೀಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 12-03-2020

ಉತ್ತರಿಸುವ ಸಚಿವರು : ಮುಖ್ಯಮಂತ್ರಿಗಳು

***

	ಪ್ರಶ್ನೆ	ಉತ್ತರ
ಅ)	ರಾಯಚೂರು ಜಿಲ್ಲೆ ದೇವದುರ್ಗ ತಾಲ್ಲೂಕಿನ ಜಾಲಹಳ್ಳಿಯಲ್ಲಿರುವ 33 ಕೆ.ವಿ. ಸ್ಟೇಷನ್‌ಗೆ ಪ್ರವಾಹ ಸಮಯದಲ್ಲಿ ನೀರು ಸೇರಿ ಸಾಕಷ್ಟು ಹಾನಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದರಿಂದ ಸುತ್ತಮುತ್ತ ಹಳ್ಳಿಗಳಲ್ಲಿ ಕೆಲವು ದಿವಸಗಳವರೆಗೆ ವಿದ್ಯುತ್ ಸಂಪರ್ಕವಿಲ್ಲದೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೈಗೊಂಡ ಪರ್ಯಾಯ ಕ್ರಮ ಯಾವುದು;	ರಾಯಚೂರು ಜಿಲ್ಲೆ ದೇವದುರ್ಗ ತಾಲ್ಲೂಕಿನ ಜಾಲಹಳ್ಳಿಯಲ್ಲಿರುವ 33/11 ಕೆ.ವಿ., ಸ್ಟೇಷನ್‌ಗೆ ಪ್ರವಾಹ ಸಮಯದಲ್ಲಿ ನೀರು ಸೇರಿ ಹಾನಿಯಾಗಿರುವುದು ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿಯ ಗಮನಕ್ಕೆ ಬಂದಿರುತ್ತದೆ. ಇದರಿಂದ ಜಾಲಹಳ್ಳಿ ಹಾಗೂ ಸುತ್ತಮುತ್ತಲಿನ ಹಳ್ಳಿಗಳಿಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಿರುವುದು ಗಮನಕ್ಕೆ ಬಂದಿರುತ್ತದೆ. ಆದ್ದರಿಂದ, ಬದಲಿ ವ್ಯವಸ್ಥೆಯಾಗಿ ಜಾಲಹಳ್ಳಿ ಹಾಗೂ ಸುತ್ತ-ಮುತ್ತಲಿನ ಗ್ರಾಮಗಳಿಗೆ ಹತ್ತಿರದ 33/11 ಕೆವಿ ಗಾಣದಳ ವಿದ್ಯುತ್ ಉಪ ಕೇಂದ್ರದಿಂದ ವಿದ್ಯುತ್ ಸರಬರಾಜು ಮಾಡಲಾಗಿರುತ್ತದೆ.
ಆ)	ಪ್ರವಾಹ ಬಂದಾಗ ಸ್ಟೇಷನ್‌ನಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳು ಜೀವನ್ಮರಣದೊಡನೆ ಕೆಲಸ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೈಗೊಂಡ ಕ್ರಮವೇನು;	ಪ್ರವಾಹ ಬಂದಾಗ ವಿದ್ಯುತ್ ಉಪ-ಕೇಂದ್ರದಲ್ಲಿನ ಉಪಕರಣಗಳು ಮತ್ತು ಸಿಬ್ಬಂದಿಗಳ ಸುರಕ್ಷತೆಗಾಗಿ ಜಾಲಹಳ್ಳಿಯ 33/11 ಕೆ.ವಿ. ವಿದ್ಯುತ್ ಉಪಕೇಂದ್ರವನ್ನು ಸ್ಥಗಿತಗೊಳಿಸಲಾಗಿರುತ್ತದೆ.
ಇ)	ಪ್ರವಾಹ ಬಂದಾಗ 33 ಕೆ.ವಿ. ಸ್ಟೇಷನ್‌ಗೆ ನೀರು ಬರದಂತೆ ಸರ್ಕಾರ ಕೈಗೊಂಡ ಕ್ರಮವೇನು;	ಸದರಿ ವಿದ್ಯುತ್ ಉಪಕೇಂದ್ರಕ್ಕೆ ಪ್ರವಾಹ ಬಂದಾಗ ನೀರು ಬರದಂತೆ ತಡೆಗಟ್ಟಲು, ಕಾಂಪೌಂಡ್ /ತಡೆಗೊಡೆಯ ನಿರ್ಮಾಣ ಕಾರ್ಯವನ್ನು ರೂ. 22.00 ಲಕ್ಷ ವೆಚ್ಚದಲ್ಲಿ ಕೈಗೊಳ್ಳಲಾಗಿದ್ದು, ಕಾಮಗಾರಿಗಳು ಪ್ರಗತಿಯಲ್ಲಿವೆ.

....2

ಈ)	33 ಕೆ.ವಿ. ಸ್ಟೇಷನ್‌ನನ್ನು ಬೇರೆಡೆಗೆ ಸ್ಥಳಾಂತರ ಮಾಡಲು ಸರ್ಕಾರದ ಮುಂದೆ ಯೋಜನೆಗಳಿದೆಯೇ?	ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ತಾಂತ್ರಿಕ ಸಮನ್ವಯ ಸಮಿತಿ ಸಭೆಯಲ್ಲಿ 33/11 ಕೆ.ವಿ., ಜಾಲಹಳ್ಳಿ ಉಪಕೇಂದ್ರವನ್ನು 110/11 ಕೆ.ವಿ.ಗೆ ಮೇಲ್ದರ್ಜೆಗೇರಿಸುವ ಪ್ರಸ್ತಾವನೆಯು ಅನುಮೋದನೆಗೊಂಡಿದ್ದು, ಜಾಲಹಳ್ಳಿಯಲ್ಲಿಯೇ ಸ್ಥಳ ಗುರುತಿಸಲಾಗಿದೆ ಮತ್ತು ಭೂಸ್ವಾದೀನ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. ಪ್ರಸ್ತುತ ಜಾಲಹಳ್ಳಿಯಲ್ಲಿರುವ 33/11 ಕೆ.ವಿ ಉಪಕೇಂದ್ರವು ಹೊಸದಾಗಿ ಗುರುತಿಸಲಾಗುತ್ತಿರುವ ಸ್ಥಳಕ್ಕೆ ಸ್ಥಳಾಂತರಗೊಂಡು, 110/11 ಕೆ.ವಿ. ಉಪಕೇಂದ್ರವಾಗಿ ಉನ್ನತೀಕರಣಗೊಳ್ಳಲಿದೆ. ಸದರಿ ಉಪಕೇಂದ್ರವು ಚಾಲನೆಗೊಂಡ ನಂತರ ಜಾಲಹಳ್ಳಿ ಹಾಗೂ ಅದರ ಸುತ್ತ–ಮುತ್ತಲಿನ ಗ್ರಾಮಗಳಿಗೆ ಉತ್ತಮ ಗುಣಮಟ್ಟದ ವಿದ್ಯುತ್ತನ್ನು ಸರಬರಾಜು ಮಾಡಬಹುದಾಗಿರುತ್ತದೆ.

ಸಂಖ್ಯೆ: ಎನರ್ಜಿ 53 ಇಬಿಎಸ್ 2020

ಬಿ.ಎಸ್. ಯಡಿಯೂರಪ್ಪ
(ಬಿ.ಎಸ್.ಯಡಿಯೂರಪ್ಪ)
ಮುಖ್ಯಮಂತ್ರಿ